1 ನೇ **ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಸಾಗರ**

**ಸಿಸಿ ನಂಬರು** 768-2023

**ಸಿ.ಡಬ್ಲ್ಯು**-10, **ಪಿ.ಡಬ್ಲ್ಯು** -3

**ಸಾಕ್ಷಿದಾರರ ಹೆಸರು** : ಸುಜಾತ ಆರ್.
ಗಂಡನ **ಹೆಸರು** : ಪರಮೇಶ್ವರಪ್ಪ
**ವಯಸ್ಸು** : 61 ವರ್ಷ
**ಉದ್ಯೋಗ** : ನಿವೃತ್ತ ಆರಕ್ಷಕ ಉಪ ನಿರೀಕ್ಷಕರು
**ವಾಸ** : ಯಡೇಹಳ್ಳಿ ಗ್ರಾಮ, ಆನಂದಪುರ, ಸಾಗರ ತಾಲ್ಲೂಕು.

**ಪ್ರಮಾಣೀಕರಿಸಿದ ದಿನಾಂಕ:14.07.2026.**

**ಮುಖ್ಯ ವಿಚಾರಣೆ :** ಸ.ಸ.ಅ. ರವರಿಂದ

1. ನಾನು ಜುಲೈ 2019 ರಿಂದ ಫೆಬ್ರುವರಿ 2024 ರವರೆಗೆ ಸಾಗರದ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಅರಕ್ಷಕ ಉಪ ನಿರೀಕ್ಷಕಳಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿಃ18.04.2022 ರಂದು ಪ್ರಕರಣದ ಕಡತವನ್ನು ಚಾಸ 9 ರವರಿಂದ ಪಡೆದು ಮುಂದಿನ ತನಿಖೆಯನ್ನು ಕೈಗೊಂಡಿರುತ್ತೇನೆ. ಅದೇ ದಿನ 1 ನೇ ಆರೋಪಿಯು ಮಾನ್ಯ ಜಿಲ್ಲಾ ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನನ್ನು ಪಡೆದು ಹಾಜರಾಗಿದ್ದು, ಸದರಿ ರವರ ದಸ್ತಗಿರಿ ಕ್ರಮವನ್ನು ಜರುಗಿಸಿರುತ್ತೇನೆ.

3. ದಿಃ22.08.2022 ರಂದು ಪ್ರಕರಣ ತನಿಖೆಯು ಪೂರ್ಣಗೊಂಡಿದ್ದು, ಆರೋಪಿತರ ವಿರುದ್ಧ ಸೂಕ್ತ ಸಾಕ್ಷ್ಯಾಧಾರಗಳು ದೊರೆತಿದ್ದರಿಂದ ಮಾನ್ಯ ನ್ಯಾಯಾಲಯಕ್ಕೆ ಅಂತಿಮ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ಪಾಟೀ ಸವಾಲುಃ- ಆರೋಪಿತರ ಪರ ಶ್ರೀ ಹೆಚ್.ಎನ್.ಡಿ. ವಕೀಲರಿಂದ

1. ಆರೋಪಿತರ ಯಾವುದೇ ತಪ್ಪು ಇಲ್ಲದೇ ಇದ್ದರೂ ನಾನು ಸೂಕ್ತ ನಿಟ್ಟಿನಲ್ಲಿ ತನಿಖೆಯನ್ನು ನಡೆಸದೇ ಆರೋಪಿತರ ವಿರುದ್ಧ ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**
**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.